## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1057
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 18.12.2024
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅನಾಧಿಕಾಲದಿಂದ ಅನುಭವಿಸಿಕೊಂಡು ಬರುತ್ತಿದ್ದ ಕಾನೆ ಬಾನೆ ಕುಮ್ಕಿ ಹೊಂದಿರುವ ಖದೀಮ್ ವರ್ಗದಾರರಿಗೆ ಕಾನೂನು ನಿಯಾಮಾವಳಿ ರೂಪಿಸಿ ಕುಮ್ಕಿಯನ್ನು ಸಕ್ರಮೀಕರಣಗೊಳಿಸಲಾಗಿದೆಯೇ; ಈ ಕುರಿತು ಆದೇಶ ಜಾರಿಗೊಳಿಸಲಾಗಿದೆಯೇ; | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 79ರ (2)ರಡಿ ಕಲಂ 79 ಉಪ-ಪ್ರಕರಣ (1)ರಲ್ಲಿ ಏನೇ ಒಳಗೊಂಡಿದ್ದಾಗ್ಯೂ, ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಬಹುದಾದಂಥ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು ರೂಢಿಯಂತೆ ಅಂಥ ಯಾವುದೇ ಆದೇಶದ ಮೇರೆಗೆ ಅನುಭೋಗಿಸಲಾಗುತ್ತಿರುವ ವಿಶೇಷಾಧಿಕಾರಗಳು ಅಂದರೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮಾ ಮತ್ತು ಬಾಣೆ ಭೂಮಿಗಳು ಮತ್ತು ಹೈದರಾಬಾದ್ ಪ್ರದೇಶದಲ್ಲಿ (ಮೋಟಸ್ಥಲ್ ತರಿ ಭೂಮಿಗಳು) (Motasthal wet lands) ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರೆಯತಕ್ಕದ್ದು ಎಂದು ತಿಳಿಸಲಾಗಿದೆ. |
| ಆ) | ಸದರಿ ವಿಚಾರ ಕುರಿತು ಕಂದಾಯ ಇಲಾಖೆ ಇದುವರೆವಿಗೂ ಯಾವೆಲ್ಲಾ ಕ್ರಮಗಳನ್ನು ತೆಗೆದುಕೊಂಡಿದೆ; ಹಾಗೂ ಈ ಸಂಬಂಧ ಖದೀಮ್ ವರ್ಗದಾರರಿಗೆ ನ್ಯಾಯ ಒದಗಿಸಲಾಗಿದೆಯೇ; | ಗೋಮಾಳ, ಗಾಯರಾಣ, ಹುಲ್ಲಬನ್ನಿ, ಸೊಪ್ಪಿನಬೆಟ್ಟ ಇತ್ಯಾದಿ ಗ್ರಾಮೀಣ ಪ್ರದೇಶದ ಸರ್ಕಾರಿ ಜಮೀನುಗಳನ್ನು ಮಂಜೂರು ಮಾಡುವ ಕುರಿತು ಒಂದು ನೀತಿಯನ್ನು ರೂಪಿಸಲು ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ವಿವಿಧ ದಿನಾಂಕಗಳಂದು ಸಭೆ ನಡೆಸಿರುತ್ತದೆ. ದಿನಾಂಕ: 24.01.2023ರಂದು ನಡೆದ ಸಭೆಯಲ್ಲಿ "ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 79(2) ರಲ್ಲಿರುವ ಜಮೀನುಗಳ ವಿಶೇಷಾಧಿಕಾರಗಳನ್ನು ಮುಂದುವರಿಸುತ್ತಾ ಅವುಗಳನ್ನು ಅಧಿಭೋಗದಾರರಿಗೆ ಅವರ ಹಿಡುವಳಿ ಜಮೀನನ್ನು ಹೊರತುಪಡಿಸಿ 5-00 ಎಕರೆಗೆ ಮೀರದಂತೆ ಸರ್ಕಾರವು ನಿರ್ಧರಿಸಬಹುದಾದಂತಹ ಗುತ್ತಿಗೆ ಮೌಲ್ಯವನ್ನು ವಿಧಿಸಿ 30 ವರ್ಷಗಳ ಅವಧಿಗೆ ಗುತ್ತಿಗೆಗೆ ನೀಡಲು ಅನುವಾಗುವಂತೆ ಕರ್ನಾಟಕ ಭೂ ಕಂದಾಯ |

| | | |
|---|---|---|
| | | ಕಾಯ್ದೆ, 1964ಕ್ಕೆ ತಿದ್ದುಪಡಿ ತರುವ ಬಗ್ಗೆ ತೀರ್ಮಾನಿಸಲಾಗಿರುತ್ತದೆ".<br><br>ಮಾನ್ಯ ಉಪ ಸಮಿತಿಯ ತೀರ್ಮಾನವನ್ನು ಅನುಷ್ಠಾನಗೊಳಿಸಲು ಇರುವ ಕಾನೂನು ತೊಡಕುಗಳ ಬಗ್ಗೆ ಸರ್ಕಾರವು ಪರಿಶೀಲಿಸುತ್ತದೆ. |
| ಇ) | ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ಎಷ್ಟು ಭೂಮಿ ವರ್ಗಾವಣೆಯಾಗಬೇಕಿತ್ತು; ಮತ್ತು ಸದರಿ ಭೂಮಿ ಈಗಾಗಲೇ ಕಂದಾಯ ಇಲಾಖೆಯ ಸುಪರ್ದಿಗೆ ಬಂದಿದೆಯೇ; | ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ವರ್ಗಾವಣೆಯಾಗಬೇಕಾದ ಯಾವುದೇ ಭೂಮಿ ಇರುವುದಿಲ್ಲ. |
| ಈ) | ಇಲ್ಲದಿದ್ದಲ್ಲಿ, ಸದರಿ ಭೂಮಿ ವರ್ಗಾವಣೆ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ.; | ಉದ್ಭವಿಸುವುದಿಲ್ಲ. |
| ಉ) | ಯಾವ ಕಾಲಮಿತಿಯೊಳಗೆ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ಸದರಿ ಭೂಮಿಯು ವರ್ಗಾವಣೆಯಾಗಲಿದೆ? | ಉದ್ಭವಿಸುವುದಿಲ್ಲ. |

ಸಂಖ್ಯೆ: ಆರ್‌ಡಿ 131 ಎಲ್‌ಜಿಕ್ಯೂ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು